# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಹಾಗೂ ಪದವಿ ಪೂರ್ವ ಕಾಲೇಜುಗಳ ಸಿಬ್ಬಂದಿಯ ವೇತನ ಪುನರ್ ನಿಗಧೀಕರಣ ಹಾಗೂ ಹೆಚ್ಚುವರಿ ವೇತನದ ವಸೂಲಿಗೆ ಸಂಬಂಧಿಸಿದ ದಿನಾಂಕ 14-6-2002ರ ಆದೇಶ ಸಂಖ್ಯೆ: ಇಡಿ 14 ಟಿಪಿಯು 2001ರಂತೆ ತಾತ್ಕಾಲಿಕವಾಗಿ ಕ್ರಮ ತೆಗೆದುಕೊಳ್ಳಬಾರದೆನ್ನುವ ಕುರಿತು ಸೂಚನೆಗಳು.

ಓದಲಾಗಿದೆ: 1) ಸರ್ಕಾರಿ ಪತ್ರ ಸಂಖ್ಯೆ: ಇಡಿ 302 ಎಸ್‌ಓಹೆಚ್ 1990, ದಿನಾಂಕ 9-7-1990 ಮತ್ತು ದಿನಾಂಕ 4-8-1990.

2) ಸರ್ಕಾರಿ ಆದೇಶ ಸಂಖ್ಯೆ: ಇಡಿ 14 ಟಿಪಿಯು 2001, ದಿನಾಂಕ: 14-06-2002.

ಪ್ರಸ್ತಾವನೆ:

1) ಮೇಲೆ (2) ರಲ್ಲಿ ಓದಲಾದ ದಿನಾಂಕ 14-6-2002ರ ಸರ್ಕಾರಿ ಆದೇಶದಲ್ಲಿ ಈ ಕೆಳಗೆ ಉದ್ಧರಿಸದಂತೆ ಆದೇಶಿಸಲಾಗಿದೆ;

"......ಸರ್ಕಾರಿ ಪತ್ರ ಸಂಖ್ಯೆ: ಇಡಿ 302 ಎಸ್‌ಓಹೆಚ್ 1990, ದಿನಾಂಕ4-8-1990ರಲ್ಲಿ ಸರ್ಕಾರವು ವಿವರವಾದ ಹಾಗೂ ಸ್ಪಷ್ಟವಾದ ಆದೇಶವನ್ನು ನೀಡಿದಾಗ್ಯೂ ಇದನ್ನು ಉಲ್ಲಂಘಿಸಿ ಸರ್ಕಾರದ ನೀತಿಗೆ ವ್ಯತಿರಿಕ್ತವಾಗಿ ದಿನಾಂಕ 4-8-1990ರಂದು ಹಾಗೂ ತದನಂತರ ಅನುದಾನ ಸಹಿತ ಅನುಮೋದನೆ ನೀಡಿದ ಪ್ರಕರಣಗಳಲ್ಲಿ ಖಾಸಗಿ ಅನುದಾನಿತ ಸಂಸ್ಥೆಗಳ ಸಿಬ್ಬಂದಿಯ ಹಿಂದಿನ ಅನುದಾನ ರಹಿತವಾಗಿ ಸಲ್ಲಿಸಿದ ಸೇವೆಯನ್ನು ಪರಿಗಣಿಸಿ ಕಾಲ್ಪನಿಕವಾಗಿ ಅಥವ ಆರ್ಥಿಕವಾಗಿ ವೇತನ ನಗದಿಪಡಿಸಿ, ಆರ್ಥಿಕ ಸೌಲಭ್ಯ ನೀಡಿರುವ ಎಲ್ಲಾ ಪ್ರಕರಣಗಳನ್ನು ಸಕ್ಷಮ ಪ್ರಾಧಿಕಾರಗಳು ಸಂಬಂಧಿತ ಸಿಬ್ಬಂಧಿಯ ವೇತನವನ್ನು ದಿನಾಂಕ 4-8-1990ರ ಆದೇಶದನ್ವಯ ಪುನರ್ ನಗದಿಪಡಿಸತಕ್ಕದ್ದು, ಹಾಗೂ ಈ ರೀತಿ ತಪ್ಪಾಗಿ ನೀಡಿದ ಹೆಚ್ಚುವರಿ ಅನಧಿಕೃತ ವೇತನದ ಮೊತ್ತವನ್ನು ಕಾನೂನು ರೀತ್ಯ ಸೂಕ್ತ ಕಂತುಗಳಲ್ಲಿ ವಾಪಸ್ಸು ಪಡೆಯಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳತಕ್ಕದ್ದು ಎಂದು ಆದೇಶಿಸಿದೆ."

2) ಕರ್ನಾಟಕ ರಾಜ್ಯ ಖಾಸಗಿ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿಗಳ ಮತ್ತು ನೌಕರರ ಸಂಘಟನೆಗಳ ಹೋರಾಟ ಸಮನ್ವಯ ಸಮಿತಿಯ ಅಧ್ಯಕ್ಷರಾದ ಶ್ರೀ ಬಸವರಾಜ್.ಎಸ್.ಹೊರಟ್ಟಿ ಹಾಗೂ ಇತರೆ ಪದಾಧಿಕಾರಿಗಳೊಂದಿಗೆ ದಿನಾಂಕ 23-8-2002ರಂದು ಉನ್ನತ ಶಿಕ್ಷಣ ಸಚಿವರ ಹಾಗೂ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಮೇಲೆ (2)ರಲ್ಲಿ ಓದಲಾದ ದಿನಾಂಕ 14-6-2002 ಸರ್ಕಾರಿ ಆದೇಶವನ್ನು ಹಿಂತೆಗೆದುಕೊಳ್ಳಬೇಕೆಂಬ

25/3/03

28(7)

26/3

ಬೇಡಿಕೆಯ ಕುರಿತು ಚರ್ಚಿಸಿ ಅದನ್ನು ಸಹಾನುಭೂತಿಯಿಂದ ಪರಿಶೀಲಿಸಲಾಗುವುದೆಂದು ತೀರ್ಮಾನಿಸಲಾಯಿತು.

3) ಅದರಂತೆ ಸರ್ಕಾರ ಈ ವಿಷಯವನ್ನು ಪರಿಶೀಲಿಸುತ್ತಿದೆ. ಇದಕ್ಕಾಗಿ ಸಾಕಷ್ಟು ಕಾಲಾವಕಾಶ ಬೇಕಾಗಿದೆ.

4) ಸರ್ಕಾರ ಈ ವಿಷಯವನ್ನು ಪುನರ್ ಪರಿಶೀಲಿಸಿ ಒಂದು ಅಂತಿಮ ನಿರ್ಧಾರವನ್ನು ತೆಗೆದುಕೊಳ್ಳುವವರೆಗೆ ದಿನಾಂಕ 14–6–2002ರ ಸದರಿ ಆದೇಶದಂತೆ ಕ್ರಮ ತೆಗೆದುಕೊಳ್ಳುವುದನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಬೇಕೆಂದು ವಿಧಾನ ಮಂಡಲದ ಉಭಯ ಸದನಗಳಲ್ಲಿ ಮಾನ್ಯ ಸದಸ್ಯರು ಸರ್ಕಾರವನ್ನು ಕೋರಿರುತ್ತಾರೆ. ವಿಧಾನ ಪರಿಷತ್ತಿನ ಸದಸ್ಯರುಗಳೊಂದಿಗೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ದಿನಾಂಕ 20–3–2003ರಂದು ಸಭೆ ನಡೆಸಿದರು. ಈ ಸಭೆಯಲ್ಲೂ ಸಹ ಮಾನ್ಯ ಸದಸ್ಯರುಗಳು ಸದರಿ ಬೇಡಿಕೆಯನ್ನು ಪುನ: ಒತ್ತಿ ಹೇಳಿದರು. ಈ ಹಿನ್ನಲೆಯಲ್ಲಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರಿ ಆದೇಶ ಸಂಖ್ಯೆ: ಇಡಿ 216 ಟಿಪಿಯು 2002,</u>**

**<u>ಬೆಂಗಳೂರು, ದಿನಾಂಕ: 21–03–2002</u>**

5) ಸರ್ಕಾರ ಈ ಕುರಿತು ಮುಂದಿನ ಆದೇಶ ಹೊರಡಿಸುವವರೆಗೆ, ಮೇಲೆ (2)ರಲ್ಲಿ ಓದಲಾದ ದಿನಾಂಕ 14–6–2002ರ ಆದೇಶದಂತೆ ಸಂಬಂಧಿಸಿದ ಸಕ್ಷಮ ಪ್ರಾಧಿಕಾರಗಳು ಕ್ರಮ ತೆಗೆದುಕೊಳ್ಳಬಾರದೆಂದು ಈ ಮೂಲಕ ಸೂಚಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ,
(ಸಿದ್ದಲಿಂಗಯ್ಯ) 21/3
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ.

ಗೆ:

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು–560001.
3) ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು–560001.
4) ಎಲ್ಲಾ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇತ್ಯಾದಿ)
5) ಎಲ್ಲಾ ಸಹ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ.
6) ಎಲ್ಲಾ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ/ಪದವಿ ಪೂರ್ವ ಶಿಕ್ಷಣ ಇಲಾಖೆ.
7) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.